**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀ ಎಸ್.ಎನ್. ಗೌಡರ್, ಸ.ಕಾ.ಇಂ. ಹಿಂದಿನ ಪ್ರಭಾರಿ ಕಾ.ಇಂ ಪಂ.ರಾ.ಇಂ ವಿಭಾಗ, ಧಾರವಾಡ ಇವರ ಮಾನ್ಯ ಕೆ.ಎ.ಟಿ. ಅರ್ಜಿ ಸಂಖ್ಯೆ: 10160/2021 ಗೆ ಸಂಬಂಧಿಸಿದಂತೆ – ಅಂತಿಮ ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 05 ಇಎನ್ ಕ್ಯೂ 2018 ದಿನಾಂಕ: 26.03.2019.
2. ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ: 10160/2021 ಕ್ಕೆ ಸಂಬಂಧಿಸಿದಂತೆ ನೀಡಿರುವ ಅಂತಿಮ ಆದೇಶ ದಿನಾಂಕ: 26.10.2021.

**ಪ್ರಸ್ತಾವನೆ:-**

ಶ್ರೀ ಎಸ್.ಎನ್. ಗೌಡರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಈ ಹಿಂದೆ ಕಾರ್ಯಪಾಲಕ ಅಭಿಯಂತರರು, ಧಾರವಾಡ ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿದ್ದ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಕಾಮಗಾರಿಗಳನ್ನು ಮಂಜೂರಾದ ಸ್ಥಳದಲ್ಲಿ ಹಾಗೂ ಮಂಜೂರಾದ ಅಂದಾಜಿನಂತೆ ನಿರ್ವಹಿಸದೆ ಪ್ರಾಥಮಿಕ ಶಾಲೆಗಳಿಗೆ ಬೇರೆ ಸ್ಥಳಗಳಲ್ಲಿ ಕಾಮಗಾರಿಗಳನ್ನು ನಿರ್ವಹಿಸಿರುವುದರಿಂದ ಸದರಿಯವರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಆಪಾದಿತ ಅಧಿಕಾರಿಗೆ ನಿಯಮ-11ರಡಿ ವಿಚಾರಣೆ ನಡೆಸಲು ದಿನಾಂಕ: 20.02.2018ರಂದು ಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣ ಪಟ್ಟಿಯನ್ನು ಜಾರಿ ಮಾಡಲಾಗಿತ್ತು. ಇದಕ್ಕೆದುರಾಗಿ ಸದರಿಯವರು ಸಲ್ಲಿಸಿದ ಲಿಖಿತ ಹೇಳಿಕೆಯನ್ನು ಪರಿಶೀಲಿಸಿದ ಸರ್ಕಾರವು ಪ್ರಕರಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ, ಧಾರವಾಡ ಇವರ ಸೂಚನೆಯ ಮೇರೆಗೆ ಕ್ರಿಯಾ ಯೋಜನೆಯಲ್ಲಿ ಮಂಜೂರಾದ ಶಾಲೆಗಳನ್ನುಹೊರತುಪಡಿಸಿ ಬೇರೆ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ದುರಸ್ಥಿ ಕಾರ್ಯವನ್ನು ಕೈಗೊಳ್ಳಲಾಗಿದೆಯೆಂದು ತಿಳಿಸಿರುತ್ತಾರೆ, ಈ ಸಂಬಂಧ ಯಾವುದೇ ದಾಖಲೆಗಳನ್ನು ಸಲ್ಲಿಸಿಲ್ಲವಾದ ಕಾರಣ ಹಾಗೂ ಸದರಿ ಪ್ರಕರಣದಲ್ಲಿ ಯಾವುದೇ ಆರ್ಥಿಕ ನಷ್ಟ ಉಂಟಾಗಿರುವುದು ಕಂಡುಬರದ ಕಾರಣ ಸದರಿಯವರ ಲಿಖಿತ ವಿವರಣೆಯನ್ನು ಪರಿಗಣಿಸಿ ಸದರಿಯವರ ವಿರುದ್ಧದ ಸಾಬೀತಾದ ಆರೋಪಗಳಿಗನುಗುಣವಾಗಿ ಅವರ ಒಂದು ವಾರ್ಷಿಕ ಕಾಲಿಕ ವೇತನ ಶ್ರೇಣಿಯಲ್ಲಿ ಒಂದು ಹಂತವನ್ನು ಒಂದು ವರ್ಷದ ಅವಧಿಗೆ ತಡೆಹಿಡಿಯವ ದಂಡನೆಯನ್ನು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ದಿನಾಂಕ:26.03.2019ರ ಆದೇಶದಲ್ಲಿ ವಿಧಿಸಲಾಗಿತ್ತು.

ಸದರಿ ದಂಡನಾದೇಶವನ್ನು ಪ್ರಶ್ನಿಸಿ ಶ್ರೀ ಎಸ್.ಎನ್. ಗೌಡರ್, ಸ.ಕಾ.ಇಂ. ಇವರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಅರ್ಜಿ ಸಂಖ್ಯೆ: 10160/2021ನ್ನು ಸಲ್ಲಿಸಿರುತ್ತಾರೆ.. ಮಾನ್ಯ ಆಡಳಿತ ನ್ಯಾಯ ಮಂಡಳಿಯು ಸದರಿ ಅರ್ಜಿಗೆ ಸಂಬಂಧಿಸಿದಂತೆ ದಿನಾಂಕ: 26.10.2021 ರಂದು ಈ ಕೆಳಕಂಡಂತೆ ಆದೇಶ ನೀಡಿರುತ್ತದೆ:-

1. The application is allowed.
2. The order bearing No. ಗ್ರಾಅಪ 05 ಇಎನ್‌ಕ್ಯೂ 2018 dated 26.03.2019 passed by the 2nd respondent (vide Annexure-A6) is set aside. However, liberty is reserved to the respondents to take appropriate course in accordance with law if need arises.

ಸರ್ಕಾರವು ಸದರಿ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲೆಗಳನ್ನು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಳಗಾವಿ ಪೀಠದ ದಿನಾಂಕ: 26.10.2021 ರ ಆದೇಶವನ್ನು ಪರಿಶೀಲಿಸಿರುತ್ತದೆ. ಶ್ರೀ ಎಸ್ .ಎನ್. ಗೌಡರ್, ಹಿಂದಿನ ಪ್ರಭಾರಿ ಕಾರ್ಯಪಾಲಕ ಅಭಿಯಂತರರು, ಧಾರವಾಡ ಇವರಿಗೆ ವಿಧಿಸಿದ್ದ ದಂಡನೆಯನ್ನು ರದ್ದುಪಡಿಸಿ ಪ್ರತಿವಾದಿ ಸರ್ಕಾರಕ್ಕೆ ಅವಶ್ಯವಿದ್ದಲ್ಲಿ ಸದರಿ ಅಧಿಕಾರಿಯ ವಿರುದ್ಧ ಕ್ರಮ ವಹಿಸಲು ಸ್ವಾತಂತ್ರ್ಯವನ್ನು ನೀಡಿರುತ್ತದೆ. ಸದರಿ ಪ್ರಕರಣದಲ್ಲಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲ ಹಾಗಾಗಿ ಮಾನ್ಯ ಆಡಳಿತ ನ್ಯಾಯ ಮಂಡಳಿಯು ನೀಡಿರುವ ಆದೇಶವನ್ನು ಒಪ್ಪಿ ಶ್ರೀ ಎಸ್.ಎನ್. ಗೌಡರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ದೋಷಮುಕ್ತಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 41 ಜಿಪಅ 2021ಬೆಂಗಳೂರು,**

**ದಿನಾಂಕ: 17.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಎಸ್.ಎನ್. ಗೌಡರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಿಂದಿನ ಪ್ರಭಾರಿ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಧಾರವಾಡ, ಇವರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 05 ಇಎನ್ ಕ್ಯೂ 2018 ದಿನಾಂಕ: 26.03.2019.ರಲ್ಲಿ ವಿಧಿಸಿರುವ ದಂಡನೆಯನ್ನು ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/2

(ಕೆ.ನದೀಮ್ ಅಹ್ಮದ್)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

19/02

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಸರ್ಕಾರಿ ವಕೀಲರು, ಕರ್ನಾಟಕ ಆಡಳಿತ ಮಂಡಳಿ, ಕಲಬುರಗಿ ಪೀಠ, ಕಲಬುರಗಿ ( ಉಲ್ಲೇಖ: ಅರ್ಜಿ ಸಂಖ್ಯೆ: 10160/2021)
7. ಶ್ರೀ ಎಸ್.ಎನ್. ಗೌಡರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ,ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಧಾರವಾಡ
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು / ವಿಶೇಷ ಕರ್ತವ್ಯಾಧಿಕಾರಿಯವರಿಗೆ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ-1) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.